# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 04.06.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 5 | ತ್ರಿವೇಣಿ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಕೆಂಚಪ್ಪ | ಸಾರ್ವಜನಿಕರು |

**-:ನಡಾವಳಿಯ ವರದಿ:-**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದನೋಡಲ್ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

- **ವಿಷಯ ಸಂಖ್ಯೆ: 1 :- 2022-23ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ-3726ರಲ್ಲಿ ಅನುದಾನವನ್ನು ಹಂಚಿಕೆ ಮಾಡಿಕೊಂಡಿರುವಂತೆ ವಾರ್ಡ್ 70ರ ವ್ಯಾಪ್ತಿಯಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಕ್ರಿಯಾ ಯೋಜನೆ ಪಟ್ಟಿಯನ್ನು ತಯಾರಿಸಿರುವ ಬಗ್ಗೆ**

ಶ್ರೀ ಅವೀಶ್ ಹೆಚ್ ಎಂ, ವಾರ್ಡ್ ನಂ.70ರ ಸಹಾಯಕ ಅಭಿಯಂತರರು ಮಾತನಾಡಿ 2022-23ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ-3726ರಲ್ಲಿ ರೂ.570.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಸದರಿ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳ ಕ್ರಿಯಾಯೋಜನೆಪಟ್ಟಿಯನ್ನು ಸಭೆಯಲ್ಲಿ ಮಂಡಿಸಿದರು.

Scanned with CamScanner

ಸದರಿ ವಿವರ ಈ ಕೆಳಕಂಡಂತಿದೆ.

| Sl. No. | Particulars | P Code | Name of Work | Estimated Cost (Rs.in Lakhs) |
|---|---|---|---|---|
| 1 | ಮಳೆ ಪ್ರವಾಹ ತಡೆಗಟ್ಟುವಿಕೆ ಮತ್ತು ಮುನ್ನೆಚ್ಚರಿಕೆಗೆ ಸಂಬಂಧಿಸಿದ ಕಾಮಗಾರಿಗಳಿಗೆ | P3726 | Improvements to Drain & Culverts at 6th Cross, Kasthuri Badavane, Bhyraveshwara Nagara, 11th Cross, Kareemsab Layout, Construction of Retaining wall and Culvert at Kempegowda Layout in Ward No.70 | 40.00 |
| 2 | ಪಾದಚಾರಿ ಮಾರ್ಗಗಳ ದುರಸ್ಥಿ ಮತ್ತು ನಿರ್ವಹಣೆ ಕಾಮಗಾರಿಗಳಿಗೆ | P3726 | Improvements and Repairs to Footpath at Ramaiah Badavane Main Road and surrounding area in Ward No.70 | 30.00 |
| 3 | ಇತರೆ ಕಾಮಗಾರಿಗಳಿಗೆ ಹಂಚಿಕೆಯಾದ ಅನುದಾನ | P3726 | Improvements to Roads and Drains at Shambhavi Nagara Main road & its surrounding crosses in Ward No.70 | 100.00 |
| 4 | | P3726 | Improvements to Roads and Drains at Kasthuri Badavane Main road & its Right side crosses in Ward No.70 | 100.00 |
| 5 | | P3726 | Improvements to Roads and Drains at DM Public school road & its surrounding crosses, Rajeshwari Nagara in Ward No.70 | 100.00 |
| 6 | | P3726 | Improvements to Roads and Drains at 10th Cross & its surrounding crosses in Rajagopala Nagara and Ramaiah Badavane Main Road and its Crosses in Ward No.70 | 100.00 |
| 7 | | P3726 | Improvements to Roads and Drains at 1st Main Road, 2nd Main Road & its surrounding crosses in Kempegowda Layout in Ward No.70 | 100.00 |
| **TOTAL AMOUNT** | | | | **570.00** |

ಸದರಿ ಕ್ರಿಯಾಯೋಜನೆಯನ್ನು ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಲಾಯಿತು.

ವಿಷಯ ಸಂಖ್ಯೆ: 2:-ರಸ್ತೆಗುಂಡಿಗಳ ಬಗ್ಗೆ

ರಸ್ತೆಗಳಲ್ಲಿ ಗುಂಡಿಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಾಲಿಕೆಯ Fix My Street App ನ್ನಲ್ಲಿ ಪ್ರತಿಯೊಂದು ರಸ್ತೆಗುಂಡಿಯ ಚಿತ್ರಸಹಿತ ವಿವರಗಳನ್ನು ದಾಖಲಿಸಿದ್ದು, ಸದರಿ ಗುಂಡಿಗಳನ್ನು ಮುಚ್ಚಿಸುವ ಕಾರ್ಯ ಪ್ರಗತಿಯಲ್ಲಿದ್ದು, ಈಗಾಗಲೇ ದೊಡ್ಡಣ್ಣ ಇಂಡಸ್ಟ್ರೀಯಲ್ ಏರಿಯಾ ಮುಖ್ಯರಸ್ತೆ, ದೊಡ್ಡಣ್ಣ ಸ್ಕೂಲ್ ರಸ್ತೆ, ಜಿ.ಕೆ.ಡಬ್ಲ್ಯೂ ಮುಖ್ಯರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ತಿಳಿಸಿದರು.

ನೋಡಲ್ ಅಧಿಕಾರಿಗಳು ಮಾತನಾಡಿ ಹೊಸದಾಗಿ ರಸ್ತೆಗುಂಡಿಗಳನ್ನು ಗುರುತಿಸಿ ಶೀಘ್ರವಾಗಿ ಮುಚ್ಚಲು ಕ್ರಮ ಕೈಗೊಳ್ಳಲು ಸೂಚಿಸಿದರು.

ವಿಷಯ ಸಂಖ್ಯೆ: 3 :- ಡಿ.ಡಬ್ಲ್ಯೂಸಿ ಸೆಂಟರ್ ಹತ್ತಿರ ಬಿದ್ದಿರುವ ತ್ಯಾಜ್ಯವನ್ನು ತೆರವುಗೊಳಿಸುವ ಬಗ್ಗೆ

ನೋಡಲ್ ಅಧಿಕಾರಿಗಳು ಮಾತನಾಡಿ, ಡಿ.ಡಬ್ಲ್ಯೂಸಿ ಸೆಂಟರ್ ಹತ್ತಿರ ಬಿದ್ದಿರುವ ಘನತ್ಯಾಜ್ಯವನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀಮತಿ ತ್ರಿವೇಣಿರವರು ಮಾತನಾಡಿ ಡಿ.ಡಬ್ಲ್ಯೂಸಿ ಸೆಂಟರ್ ಹತ್ತಿರ ಬಿದ್ದಿರುವ ಘನತ್ಯಾಜ್ಯವನ್ನು ಕೂಡಲೇ ತೆರವುಗೊಳಿಸುವುದಾಗೀ ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

Scanned with CamScanner

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 70, ರಾಜಗೋಪಾಲ ನಗರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.70, ರಾಜಗೋಪಾಲ ನಗರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ

Scanned with CamScanner